ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21 ದಿನಾಂಕ:04-01-2021

## ಸುತ್ತೋಲೆ

ವಿಷಯ :2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳು ನೋಂದಾಯಿಸಿಕೊಳ್ಳುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ :1.ಪಪೂಶಿಇ/ಪರೀಕ್ಷೆ/ಖಾ.ಅ.ನೊ/2020-21 ದಿನಾಂಕ:09.10.2020
2.ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21,ದಿನಾಂಕ:11-11-2020
3.ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21,ದಿನಾಂಕ:30-11-2020

*****

ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು, ಇವರ ಪತ್ರ ಸಂಖ್ಯೆ : ಬಿ3/ಪೂ.ಅಂ.ಮೇ.ಮು.ಲ್ಯಾ&ಸ.09/2019-20, ದಿನಾಂಕ : 26-11-2020ರನ್ವಯ, ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆ ಮತ್ತು ಪೂರಕ ಪರೀಕ್ಷೆಯ ಅಂಕಪಟ್ಟಿಗಳನ್ನು ಮಂಡಳಿಯಿಂದ ರವಾನಿಸುವ ಕಾರ್ಯ ಚಾಲನೆಯಲ್ಲಿದ್ದು, ವಿದ್ಯಾರ್ಥಿಗಳಿಗೆ ವಿತರಿಸಲು ಸಮಯಾವಕಾಶದ ಅವಶ್ಯಕತೆ ಇರುವುದರಿಂದ, 2021ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿಯಾಗಿ ನೋಂದಾಯಿಸಲು ಬಯಸುವ ವಿದ್ಯಾರ್ಥಿಗಳಿಗೆ ಅಂತಿಮ ದಿನಾಂಕವನ್ನು ಹೆಚ್ಚುವರಿಯಾಗಿ ವಿಸ್ತರಿಸಲು ಕೋರಿರುವ ಹಿನ್ನೆಲೆಯಲ್ಲಿ ಖಾಸಗಿ ಅಭ್ಯರ್ಥಿಗಳಿಗೆ ನೋಂದಣಿ ಮಾಡಿಕೊಳ್ಳುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿತ್ತು.

| ಕ್ರ ಸ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಅರ್ಜಿಗಳನ್ನು Online ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ದಂಡ ಶುಲ್ಕವಿಲ್ಲದೆ | 01-12-2020 ರಿಂದ 19-12-2020 | 21-12-2020 | 19-12-2020 | 22-12-2020 |
| 2. | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತು ಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ.50.00 ರಂತೆ ಗರಿಷ್ಠ ರೂ.500.00 | 21-12-2020 ರಿಂದ 02-01-2021 | 04-01-2021 | 02-01-2021 | 05-01-2021 |

ಆದರೆ ವಿದ್ಯಾರ್ಥಿಗಳು ಹಾಗೂ ಪೋಷಕರುಗಳು ದೂರವಾಣಿ ಕರೆಗಳ ಮೂಲಕ ದಿನಾಂಕ ವಿಸ್ತರಿಸುವಂತೆ ಮನವಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ ಸ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಅರ್ಜಿಗಳನ್ನು Online ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡ ಶುಲ್ಕ 500/-ರೂ. +ವಿಶೇಷ ದಂಡ ಶುಲ್ಕ ಪ್ರತಿ ದಿನಕ್ಕೆ 70/-ರೂ.ನಂತೆ | 04-01-2021 ರಿಂದ 08-01-2021 | 11-01-2021 | 08-01-2021 | 12-01-2021 |

(ಪು.ತಿ.ನೋ)

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು **Online portal**ನಲ್ಲಿ **update** ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು **update** ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ: **15-01-2021.**

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

ಜಂಟಿ ನಿರ್ದೇಶಕರು (ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

<u>ಪ್ರತಿಗಳು:</u>

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ.
(ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು) ಪ್ರತಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಅಂಟಿಸಲು ತಿಳಿಸಿದೆ.
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ
4. ಗಣಕಶಾಖೆಗೆ
5. ಇ-ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು), ಮತ್ತು ಎಲ್ಲಾ ಮಾಧ್ಯಮಗಳಲ್ಲಿ ಪ್ರಕಟವಾಗುವಂತೆ ಕ್ರಮ ಕೈಗೊಳ್ಳಲು
6. ಕಛೇರಿ ಪ್ರತಿ.